# Department of Public Education, Government of Karnataka

## Office of Commissioner, New Public Offices, Nrupatunga Road, Bengaluru

**Office of the Deputy Director of Public Instructions, Government of Karnataka**

**District of Mysuru**

**Certificate of First Recognitionv/ Renewal of Recognition**

No: 14719

Date: 23rd February 2022

**Sub:** Regarding issue of School Recognition under Right to Education of Children Act 2009 and Karnataka Education act 1983

With respect to the above subject the management of Podar Education & Sports Trust has applied online application for the renewal of recognition to grade 1 – 10 (First Recognition/ Renewal of recognition), English medium for their Podar International School, No 289 A & B, HEBBAL INDUSTRIAL AREA with DISE Code 29260822502, verified all the documents, verified onsite location, by the officers of the department and issued the renewal of recognition for the period of academic year starting from 01- June 2021 to 31st March 2026 under the following conditions

| S.No | Description | Online Application No 14719 |
|---|---|---|
| 1 | Name and Address of School Management | PODAR EDUCATION AND SPORTS TRUS |
| 2 | Name and Address of School | PODAR INTERNATIONAL SCHOOL NO 289 A & B, HEBBAL INDUSTRIAL AREA |
| 3 | DISE Code | 29260822502 |
| 4 | Year and period of First Recognition/Renewal of Recognition | From the academic year 2021-2022 to 2025-26 |
| 5 | Class/Division/Medium 1 to 5, 1 to 8, 6 yo8 (1 to 10 or 9 and 10) | Grades 1 to 8<br>Division : 8 each<br>Medium English |
| 6 | Aided/Unaided First Recognition/Renewal of Recognition | Pvt. Unaided/Renewal Recognition |

Terms and Conditions:

1. As per the guidelines and rules of Right to Education Act 2009 and Karnataka Education Act 1983 and the rules thereafter, the school has been registered and renewed the recognition [Primary Education / Secondary Education] 1to 5 [1 to 5, 1 to 8, 6 to 8, 9 and 10 and 1 to 10] Other than these classes running additional classes or division shall not be permitted.
2. The school will function under the rules of Right to Education Act 2009 and Karnataka Education Act – 1983
3. As per the Right to Education Act 2009, 25% of the seat to be reserved for children from weaker section. Government has the right to admit the students to the school as per RTE guidelines for all the schools coming under RTE (Government has made the rule to admit the students to Government or Aided schools which are in close vicinity of residence of the parents. If there are any such schools then the admission to students will be provided) If there are no Government or Aided schools than the private schools should admit the Government allotted students to their school and provide them the primary education. These students to be given opportunities to continue their studies without any discrimination.
4. As explained in clause 3 above, Government releases school fee as per the rule, for all the students who got admitted under RTE act. Hence collecting fee from these students is restricted
5. School and Governing Council has been restricted from collecting in any form the. Capitation fee or voluntary donations from parents at the time of student admission or later.
6. As per the circular of the Govt. with No ED.31/PGC-2019 dated 27.07.2019, school/Governing Council shall publish fee details in the prescribed website of the board and also to be published in the school notice board. No extra fee than the fixed fee to be collected from the parents
7. School/ Governing Council shall admit the students only in the scheduled period of admission as decided by the Government
8. School/ Governing Council shall not refuse the admission against the following points:

NOTARY
K.B. NAGESHA
B.A., LL.B.,
Advocate & Notary
Reg.No. 12269
MYSORE
Expiry Date
26-12-2026
GOVERNMENT OF INDIA

(i) Lack of age proof document
(ii) Based on Caste, Religion, Place of Birth, Language
(iii) Seeking admission after the last date of admission

9. As per the rules and regulations of RTE Act and Karnataka Education Act safety measures to be taken [Fire Safety and Building Safety certificates from the concerned authority and Learning safety as per K.S.C.P.C.R and N.C.P.C.R ]
10. School / Governing Council follows the below points:
    (i) Shall not detain an admitted student in any of the classes till the completion of primary and middle school or expelled from the school
    (ii) Shall not harass any child mentally or physically
    (iii) Getting pass in any of the board examination is not necessary for a child till the completion of primary education
    (iv) Every child who completes primary education shall be issued the certificate as per the rules of RTE Rule – 21 and Karnataka Education Act and rule thereby
    (v) School shall include students with Special Education Need / Special children, as per the rules and provision of RTE Act and Karnataka Education Act,
    (vi) The appointed teachers to possess the minimum qualification as per the rules of RTE Act and Karnataka Education Act and according to the Government order for Primary and Secondary school teachers.
    (vii) Teachers' salary and allowances, service rules and regulations to be as per the directions of State Government. Also as per the notice of the Government [Provident Fund (PE)], salary to be paid through the bank transactions and they come under Employee's State Insurance corporation(ESI)
    (viii) Teachers to perform the duties and responsibilities as per Teacher Act Section 24(1) and RTE Act and rule and also Karnataka Education Act and rules, rule – 17. And they shall not engage themselves in private tuition or supervision or consideration of the same
11. School shall follow curriculum and text books as per the affiliated board
12. School shall admit students based on available facilities in the school and as per the Karnataka Education Act and rules Section -19.
13. School shall follow the rules and regulations as specified in the section 19. School staff to be appointed as per the rules and act of Karnataka Education Act
14. Unauthorised class / divisions should not be opened within or outside the school premises
15. School building and other basic facilities related to the school shall not be used during the day or night for commercial activities, political activities or non-academic activities
16. The school cannot be run for the profit of any individual, group or association
17. The school to be audited by Chartered Accountant and the copy of the audit report to be submitted to Deputy Director / Block Education officer every year before end of June
18. School to follow Language policy as per the Government notification [Kannada Language Policy – 2016]
19. Governing Body and teachers to work as per the RTE act and Karnataka Education Act and rules
20. School / Governing body to follow the rules and directives of Government and board without fail
21. It is mandatory to update in SATS, the school information every year before end of the month - March.
22. If the above conditions are violated, the school recognition shall be cancelled as per the RTE Act 2009 and Karnataka Education Act 1983.

-s/d -

Deputy Director (Administration)
Department of Public Education
Mysuru (2926) District

1. To The Management of PODAR EDUCATION AND SPORTS TRUST
2. To The Principal/ No 289 A & B, HEBBAL INDUSTRIAL AREA/ PODAR INTERNATIONALSCHOOL
3. To Block education Officer, MYSORE RURAL(292608) Taluk/Division MYSURU(2926) District
4. Office Copy

NOTARY K.B. NAGESHA B.A., LL.B., Advocate & Notary Reg.No. 12269 MYSORE Expiry Date 26-12-2026 GOVERNMENT OF INDIA

Translated From Kannada to English Verified & Found Correct
NOTARY, MYSORE

16 JUN 2023

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ

ಆಯುಕ್ತರ ಕಚೇರಿ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ,

MYSURU ಜಿಲ್ಲೆ.

## ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ ಪ್ರಮಾಣ ಪತ್ರ

ಸಂಖ್ಯೆ: 14719

ದಿನಾಂಕ: 23-Feb-2022

ವಿಷಯ: ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ-1983 ಯೊಳಗೆ ರಚಿತವಾಗಿರುವ ನಿಯಮಗಳನ್ವಯ ಶಾಲಾ ಮಾನ್ಯತೆಯನ್ನು ನೀಡುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ **PODAR EDUCATION AND SPORTS TRUST** ಆಡಳಿತ ಮಂಡಳಿಯು **29260822502** ಡೈಸ್ ಕೋಡ್ ಸಂಖ್ಯೆ **PODAR INTERNATIONAL SCHOOL-NO 289 A & b, HEBBAL INDUSTRIAL AREA** ಶಾಲೆಗೆ [ವಿಳಾಸ], **1 - 10** ತರಗತಿವರೆಗೆ **English** ಮಾಧ್ಯಮ **Renewal Recognition** ಶಾಲಾ [ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ] ಮಾನ್ಯತೆಯನ್ನು ನವೀಕರಿಸಲು ಆನ್‌ಲೈನ್‌ನಲ್ಲಿ ಸಲ್ಲಿಸಿದ್ದ ಅರ್ಜಿಯನ್ನು ಇಲಾಖೆಯ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸಿ, ಸ್ಥಳ ಪರಿಶೀಲನೆ ನಡೆಸಿ, **01-Jun-2021** ಸಾಲಿನಿಂದ **31-May-2026** ಸಾಲಿನವರೆಗೆ ಈ ಕೆಳಕಂಡ ಷರತ್ತುಗಳೊಂದಿಗೆ ಮಾನ್ಯತೆಯನ್ನು ನವೀಕರಿಸಿದೆ.

| ಕ್ರ.ಸಂ | ವಿವರ | ಆನ್ಲೈನ್ ಅರ್ಜಿ ಸಂಖ್ಯೆ :- 14719 |
|---|---|---|
| 1 | ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸ | **PODAR EDUCATION AND SPORTS TRUST** |
| 2 | ಶಾಲೆಯ ಹೆಸರು ಮತ್ತು ವಿಳಾಸ | **PODAR INTERNATIONAL SCHOOL-NO 289 A & b, HEBBAL INDUSTRIAL AREA** |
| 3 | ಡೈಸ್ ಕೋಡ್ ಸಂಖ್ಯೆ: | **29260822502** |
| 4 | ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ ಮಾಡಿದ ಶೈಕ್ಷಣಿಕ ಸಾಲು (ಅವಧಿ) | **2021-2022 ಸಾಲಿನಿಂದ 2025-2026 ರವರೆಗೆ** |
| 5 | ತರಗತಿ/ ವಿಭಾಗ/ ಮಾಧ್ಯಮ1 ರಿಂದ 5, 1 ರಿಂದ 8, 6 ರಿಂದ 8, (1 ರಿಂದ 10 ಅಥವಾ 9 ಮತ್ತು 10 ತರಗತಿಗಳು) | ತರಗತಿ : **1 to 8**<br>ತಲಾ ವಿಭಾಗಗಳು : **8**<br>ಮಾಧ್ಯಮ : **English** |
| 6 | ಶಾಲೆಯನ್ನು ಅನುದಾನ ಸಹಿತ/ ಅನುದಾನ ರಹಿತ ವಾಗಿ ಪ್ರಥಮ ಮಾನ್ಯತೆ ಮಾನ್ಯತೆ ನವೀಕರಣ ನೀಡಿದೆ | **Pvt. Unaided / Renewal Recognition** |

ಷರತ್ತುಗಳು:

1. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009, ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಅಡಿಯಲ್ಲಿ ಹಾಗೂ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಅನುಸಾರ ಶಾಲೆಯನ್ನು ನೋಂದಾಯಿಸಿದ್ದು, ನೋಂದಾಯಿಸಿದ ಶಾಲೆಯ ತರಗತಿವರೆಗೆ ಮಾನ್ಯತೆಯನ್ನು ನವೀಕರಿಸಲಾಗಿದೆ. [ಪ್ರಾಥಮಿಕ ಶಿಕ್ಷಣ / ಪ್ರೌಢ ಶಿಕ್ಷಣ] **1to 5th** [1 ರಿಂದ 5, 1 ರಿಂದ 8, 6 ರಿಂದ 8, 9 ಮತ್ತು 10 ಹಾಗೂ 1 ರಿಂದ 10] ಈ ಶಾಲೆಗಳ ತರಗತಿಗಳ ಹೊರತಾಗಿ ಹೆಚ್ಚುವರಿ ತರಗತಿಗಳನ್ನು ಮತ್ತು ವಿಭಾಗಗಳನ್ನು ನಡೆಸಲು ಅನುಮತಿ ಇರುವುದಿಲ್ಲ.
2. ಶಾಲೆಯು ಕರ್ನಾಟಕ ಶಿಕ್ಷಣ ಕಾಯ್ದೆ-1983 ಮತ್ತು ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಕಾರ್ಯನಿರ್ವಹಿಸುವುದು.
3. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಶೇಕಡಾ 25%ರಷ್ಟು ಸೀಟುಗಳನ್ನು ದುರ್ಬಲ ವರ್ಗದ ಮಕ್ಕಳಿಗೆ ಮೀಸಲಿಡುವುದು. ಆರ್.ಟಿ.ಇ ವ್ಯಾಪ್ತಿಗೆ ಒಳಪಡುವ ಶಾಲೆಗಳಿಗೆ ಸರ್ಕಾರವು ಮೀಸಲಿಟ್ಟ ಸೀಟುಗಳನ್ನು ಆರ್.ಟಿ.ಇ ಅಡಿಯಲ್ಲಿ ದಾಖಲಿಸಲು ಅಧಿಕಾರ ಹೊಂದಿರುತ್ತದೆ. [ಸರ್ಕಾರವು ಮಕ್ಕಳ ಪೋಷಕರು ವಾಸಿಸುವ ಅಕ್ಕ-ಪಕ್ಕದ ಶಾಲೆಗಳಲ್ಲಿ ದಾಖಲಿಸಲು ಅನುಕೂಲವಾಗುವಂತೆ ನಿಯಮಗಳನ್ನು ರೂಪಿಸಿದ್ದು, ಅದರಂತೆ ಸರ್ಕಾರಿ, ಸರ್ಕಾರದಿಂದ ಅನುದಾನ ಪಡೆದ ಶಿಕ್ಷಣ ಸಂಸ್ಥೆಗಳು ಇದ್ದಲ್ಲಿ ಆ ಶಾಲೆಗೆ ಮಕ್ಕಳನ್ನು ದಾಖಲಿಸಲಾಗುವುದು] ಇಲ್ಲದಿದ್ದ ಪಕ್ಷದಲ್ಲಿ ಖಾಸಗಿ ಶಾಲೆಗಳು ಸರ್ಕಾರದಿಂದ ದಾಖಲಿಸುವ ಮಕ್ಕಳನ್ನು ದಾಖಲಿಸಿಕೊಂಡು ಪ್ರಾಥಮಿಕ ಹಂತದವರೆಗೆ ವಿದ್ಯಾಭ್ಯಾಸ ಮುಂದುವರೆಸಲು ಅವಕಾಶ ನೀಡುವುದು. ಈ ಮಕ್ಕಳನ್ನು ಯಾವುದೇ ತಾರತಮ್ಯವಿಲ್ಲದ ವ್ಯಾಸಂಗ ಮುಂದುವರೆಸಲು ಅವಕಾಶ ಕಲ್ಪಿಸುವುದು.
4. ಕಂಡಿಕೆ:3ರಲ್ಲಿ ವಿವರಿಸಿರುವಂತೆ ಆರ್.ಟಿ.ಇ ನಿಯಮದಡಿ ದಾಖಲಾದ ಮಕ್ಕಳ ಶುಲ್ಕಗಳನ್ನು ನಿಯಮಾನುಸಾರ ಸರ್ಕಾರವು ಬಿಡುಗಡೆ ಮಾಡುತ್ತದೆ. ಆದ್ದರಿಂದ ಈ ಮಕ್ಕಳಿಂದ ಯಾವುದೇ ಶುಲ್ಕವನ್ನು ವಸೂಲು ಮಾಡುವುದನ್ನು ನಿರ್ಬಂಧಿಸಿದೆ.
5. ಶಾಲೆ ಮತ್ತು ಶಾಲೆಯ ಆಡಳಿತ ಮಂಡಳಿಯು ಯಾವುದೇ ತರವಾದ ಕ್ಯಾಪಿಟೇಷನ್ ಶುಲ್ಕವನ್ನು ಮತ್ತು ಸ್ವಇಚ್ಛೆಯಿಂದ ನೀಡುವ ಡೊನೇಷನ್‌ಗಳನ್ನು ಪೋಷಕರಿಂದ ದಾಖಲಾತಿ ಸಮಯದಲ್ಲಾಗಲೀ ಅಥವಾ ನಂತರದಲ್ಲಾಗಲೀ ಯಾವುದೇ ರೀತಿಯಾಗಿ ವಸೂಲು ಮಾಡುವುದನ್ನು ನಿರ್ಬಂಧಿಸಿದೆ.
6. ಶಾಲೆಯು / ಆಡಳಿತ ಮಂಡಳಿಯು ತಮ್ಮ ಶಾಲೆಯಲ್ಲಿ ಮಕ್ಕಳ ಪೋಷಕರಿಂದ ವ್ಯಾಸಂಗ ಶುಲ್ಕವಾಗಿ ವಸೂಲು ಮಾಡುವ ಶುಲ್ಕದ ಮಾಹಿತಿಯನ್ನು ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ:31:ಪಿಜಿಸಿ:2019, ದಿನಾಂಕ:27.07.2019ರನ್ವಯ ಮಾಹಿತಿಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಹಾಗೂ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ನಿಗದಿತ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ವಸೂಲು ಮಾಡತಕ್ಕದ್ದಲ್ಲ.
7. ಶಾಲೆಯು / ಆಡಳಿತ ಮಂಡಳಿಯು ವಿದ್ಯಾರ್ಥಿಗಳನ್ನು ಸರ್ಕಾರವು ನಿಗದಿಪಡಿಸಿದ ಅವಧಿಯಲ್ಲಿಯೇ ದಾಖಲಾತಿ ಮಾಡಿಕೊಳ್ಳುವುದು.
8. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡ ಅಂಶಗಳ ವಿರುದ್ಧ ದಾಖಲಾತಿಯನ್ನು ನಿರಾಕರಿಸುವಂತಿಲ್ಲ.
   - (i) ವಯಸ್ಸಿನ ಪುರಾವೆ ಕೊರತೆಯಿಂದಾಗಿ.
   - (ii) ಜಾತಿ, ಧರ್ಮ, ಹುಟ್ಟಿದ ಸ್ಥಳ, ಭಾಷೆಯ ಆಧಾರದ ಮೇಲೆ.

(iii) ಪ್ರವೇಶದ ವಿಸ್ತೃತ ಅವಧಿಯ ನಂತರ ಪ್ರವೇಶವನ್ನು ಕೋರಿದರೆ.

9. ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು, ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವುದು. [ಸಂಬಂಧಿಸಿದ ಪ್ರಾಧಿಕಾರಗಳಿಂದ ಅಗ್ನಿ ಸುರಕ್ಷತೆ ಮತ್ತು ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ಹಾಗೂ K.S.C.P.C.R ಮತ್ತು N.C.P.C.R ಪ್ರಕಾರ ಮಕ್ಕಳ ಕಲಿಕೆಯ ಸುರಕ್ಷತೆ].

10. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡಂತೆ

(i) ಪ್ರವೇಶ ಪಡೆದ ಯಾವುದೇ ಮಗುವನ್ನು ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಮತ್ತು ಮಾಧ್ಯಮ ಶಿಕ್ಷಣವನ್ನು ಪೂರ್ಣಗೊಳಿಸುವವರೆಗೆ ಯಾವುದೇ ತರಗತಿಯಲ್ಲಿ ಹಿಡಿದಿಟ್ಟುಕೊಳ್ಳಬಾರದು ಅಥವಾ ಶಾಲೆಯಿಂದ ಹೊರಹಾಕಬಾರದು.

(ii) ಯಾವುದೇ ಮಗುವನ್ನು ದೈಹಿಕ ಅಥವಾ ಮಾನಸಿಕವಾಗಿ ಕಿರುಕುಳಕ್ಕೆ ಒಳಪಡಿಸಬಾರದು.

(iii) ಪ್ರಾಥಮಿಕ ಶಿಕ್ಷಣ ಪೂರ್ಣಗೊಳ್ಳುವವರೆಗೆ ಯಾವುದೇ ಮಗು ಯಾವುದೇ ಬೋರ್ಡ್ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಅಗತ್ಯವಿಲ್ಲ.

(iv) ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸುವ ಪ್ರತಿ ಮಗುವಿಗೆ ಆರ್.ಟಿ.ಇ ನಿಯಮ-21 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನಿಗದಿಪಡಿಸಿದಂತೆ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ.

(v) ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಬಂಧನೆಗಳ ಪ್ರಕಾರ ಶಾಲೆಯು ವಿಶೇಷ ಅಗತ್ಯತೆಗಳು / ವಿಶೇಷ ಮಕ್ಕಳನ್ನು ಹೊಂದಿರುವ ಮಕ್ಕಳನ್ನು ಸಹ ಸೇರಿಸಿಕೊಳ್ಳಬೇಕು.

(vi) ನೇಮಕಗೊಂಡ ಶಿಕ್ಷಕರು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಹಾಗೂ ಸರ್ಕಾರಿ ಆದೇಶಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ನಿಗದಿಪಡಿಸಿದಂತೆ ಕನಿಷ್ಠ ವಿದ್ಯಾರ್ಹತೆಗಳನ್ನು ಹೊಂದಿರತಕ್ಕದ್ದು.

(vii) ಶಿಕ್ಷಕರಿಗೆ ಪಾವತಿಸಬೇಕಾದ ವೇತನ ಮತ್ತು ಭತ್ಯೆಗಳು ಹಾಗೂ ಸೇವಾ ನಿಯಮಗಳು ಮತ್ತು ಷರತ್ತುಗಳು ರಾಜ್ಯ ಸರ್ಕಾರವು ಸೂಚಿಸಿದಂತೆ ಇರುತ್ತದೆ. ಮತ್ತು ಸರ್ಕಾರಿ ಅಧಿಸೂಚನೆ [ಭವಿಷ್ಯ ನಿಧಿ (Pಈ)] ಮತ್ತು ಪಾವತಿಸಬೇಕಾದ ಬ್ಯಾಂಕ್ ಮತ್ತು ಇತರೆ ವೇತನಗಳ ಮೂಲಕ ಶಿಕ್ಷಕರಿಗೆ ವೇತನವನ್ನು ಪಾವತಿಸಲಾಗುತ್ತದೆ. ಮತ್ತು ಉದ್ಯೋಗಿ ರಾಜ್ಯ ವಿಮೆಗೆ (ಇSI) ಒಳಪಡಿಸುತ್ತದೆ.

(viii) ಶಿಕ್ಷಕರು ಕಾಯ್ದೆ ಸೆಕ್ಷನ್-24[1] ಮತ್ತು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಯಮ-17ರ ಅಡಿಯಲ್ಲಿ ಸೂಚಿಸಲಾದ ಕರ್ತವ್ಯಗಳನ್ನು ನಿರ್ವಹಿಸುತ್ತಾರೆ ಮತ್ತು ಮೇಲ್ವಿಚಾರಣೆ ಪರಿಗಣನೆಗಳಿಗಾಗಿ ಖಾಸಗಿ ಟ್ಯೂಷನ್‌ಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದಿಲ್ಲ.

11. ಶಾಲೆಯು ಸಂಯೋಜಿತವಾಗಿರುವ ಶೈಕ್ಷಣಿಕ ಪ್ರಾಧಿಕಾರದ ಪಠ್ಯಕ್ರಮ ಮತ್ತು ಪಠ್ಯ ಪುಸ್ತಕಗಳನ್ನು ಅನುಸರಿಸುವುದು.

12. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳು ಸೆಕ್ಷನ್-19ರಲ್ಲಿ ಸೂಚಿಸದಂತೆ ಶಾಲೆಯಲ್ಲಿ ಲಭ್ಯವಿರುವ ಸೌಲಭ್ಯಗಳಿಗೆ ಅನುಗುಣವಾಗಿ ಶಾಲೆಯು ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳುವುದು.

13. ಸೆಕ್ಷನ್-19ರಲ್ಲಿ ನಿರ್ದಿಷ್ಟಪಡಿಸಿದಂತೆ ಶಾಲೆಯು ನಿಯಮಗಳು ಮತ್ತು ಮಾನದಂಡಗಳನ್ನು ನಿರ್ವಹಿಸುವುದು. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಲ್ಲಿ ಸೂಚಿಸಿರುವಂತೆ ಇಲಾಖಾ ಸಿಬ್ಬಂದಿಗಳನ್ನು ನೇಮಿಸುವುದು.

14. ಶಾಲೆಯ ಆವರಣದಲ್ಲಿ ಅಥವಾ ಹೊರಗೆ ಅನಧಿಕೃತವಾಗಿ ತರಗತಿ / ವಿಭಾಗಗಳನ್ನು (ಬ್ರಾಂಚ್) ತೆರಯಬಾರದು.

15. ಶಾಲೆಗೆ ಸಂಬಂಧಿಸಿದ ಶಾಲಾ ಕಟ್ಟಡಗಳು ಮತ್ತು ಇತರ ಮೂಲಭೂತ ಸೌಕರ್ಯಗಳನ್ನು ಹಗಲು ಅಥವಾ ರಾತ್ರಿಯಲ್ಲಿ ಯಾವುದೇ ವಾಣಿಜ್ಯ ಚಟುವಟಿಕೆಗಳಿಗೆ ಅಥವಾ ರಾಜಕೀಯ ಮತ್ತು ಶೈಕ್ಷಣಿಕೇತರ ಚಟುವಟಿಕೆಗಳಿಗೆ ನೀಡಬಾರದು.

16. ಶಾಲೆಯನ್ನು ಯಾವುದೇ ವ್ಯಕ್ತಿ ಅಥವಾ ಗುಂಪು ಅಥವಾ ಸಂಘದ ಲಾಭಕ್ಕಾಗಿ ನಡೆಸಬಾರದು.

17. ಶಾಲೆಯನ್ನು ಚಾರ್ಟೆಡ್ ಅಕೌಂಟೆಂಟ್‌ನಿಂದ ಆಡಿಟ್ ಮಾಡಿಸಿ, ಪ್ರತಿಯನ್ನು ಪ್ರತಿ ವರ್ಷ ಜೂನ್ ಅಂತ್ಯದೊಳಗೆ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸುವುದು.

18. ಸರ್ಕಾರಿ ಅಧಿಸೂಚನೆಯ [ಕನ್ನಡ ಭಾಷಾ ನೀತಿ-2016] ಪ್ರಕಾರ ಶಾಲೆಯು ಭಾಷಾ ನೀತಿಯನ್ನು ಅನುಸರಿಸುವುದು.

19. ಆರ್.ಟಿ.ಇ ಕಾಯ್ದೆ ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಆಡಳಿತ ಮಂಡಳಿ ಮತ್ತು ಶಿಕ್ಷಕರುಗಳು ಕಾರ್ಯನಿರ್ವಹಿಸುವುದು.

20. ಶಾಲೆ / ಆಡಳಿತ ಮಂಡಳಿಯು ಸರ್ಕಾರ ಮತ್ತು ಇಲಾಖೆಯ ನಿಯಮ ಮತ್ತು ನಿರ್ದೇಶನವನ್ನ ತಪ್ಪದೇ ಪಾಲಿಸುವುದು.

21. ಪ್ರತಿ ವರ್ಷದ ಮಾರ್ಚ್ ಅಂತ್ಯದ ಒಳಗಾಗಿ ಎಸ್.ಎ.ಟಿ.ಎಸ್‌ನಲ್ಲಿ ಶಾಲಾ ಮಾಹಿತಿಯನ್ನು ನಿಯಮನುಸಾರ ಅಪ್‌ಡೇಟ್ ಮಾಡುವುದನ್ನು ಕಡ್ಡಾಯಗೊಳಿಸಿದೆ.

22. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

ಉಪನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ
MYSURU(2926) ಜಿಲ್ಲೆ

1. ಸಂಬಂಧಿಸಿದ ಆಡಳಿತ ಮಂಡಳಿ **PODAR EDUCATION AND SPORTS TRUST**

2. ಮುಖ್ಯ ಶಿಕ್ಷಕರು, / **NO 289 A & b, HEBBAL INDUSTRIAL AREA / PODAR INTERNATIONAL SCHOOL**

3. ಕ್ಷೇತ್ರ ಶಿಕ್ಷಣಾಧಿಕಾರಿಗಳು, **MYSORE RURAL(292608)** ತಾಲ್ಲೂಕು/ವಲಯ **MYSURU(2926)** ಜಿಲ್ಲೆ.

4. ಕಛೇರಿ ಪ್ರತಿ.